ಸದನದಲ್ಲಿ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತನೆಯ ಅಧಿವೇಶನ

ಶುಕ್ರವಾರ, ದಿನಾಂಕ : 20 ನೇ ಮಾರ್ಚ್, 2020

ಮಾನ್ವಿ ಪಟ್ಟಣದಲ್ಲಿ ನಿರ್ಮಾಣವಾಗಿರುವ ``ಕನ್ನಡ ಭವನ'' ಬಗ್ಗೆ

ಶ್ರೀ ಎನ್. ಎಸ್. ಬೋಸ್‌ರಾಜು(ವಿಧಾನಸಭೆಯಿಂದ ಚುನಾಯಿತರಾದವರು):-

203 (1620) ಮಾನ್ಯ ಪ್ರವಾಸೋದ್ಯಮ, ಕನ್ನಡ ಮತ್ತು ಸಂಸ್ಕೃತಿ ಹಾಗೂ ಯುವ ಸಬಲೀಕರಣ ಮತ್ತು ಕ್ರೀಡಾ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ರಾಯಚೂರು ಜಿಲ್ಲೆಯ ಮಾನ್ವಿ ಪಟ್ಟಣದಲ್ಲಿ ಸುವರ್ಣ ಗ್ರಾಮ ಯೋಜನೆ ಅಡಿಯಲ್ಲಿ ಮಂಜೂರಾಗಿರುವ ``ಕನ್ನಡ ಭವನ'' ದ ಕಾಮಗಾರಿ ಪೂರ್ಣಗೊಳಿಸದೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಹಾಗಿದ್ದಲ್ಲಿ, ಸಾರ್ವಜನಿಕರ ಅನುಕೂಲಕ್ಕಾಗಿ ಸದರಿ ಭವನವನ್ನು ಅಭಿವೃದ್ಧಿ ಪಡಿಸಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು ;

(ಆ) 2014-15 ರಿಂದ 2019-20ನೇ ಸಾಲಿನವರೆಗೆ ರಾಯಚೂರು ಜಿಲ್ಲೆಯ ಮಾನ್ವಿ ತಾಲ್ಲೂಕಿಗೆ ಗಡಿ ಅಭಿವೃದ್ಧಿ ಪ್ರಾಧಿಕಾರದಿಂದ ಮಂಜೂರಾಗಿರುವ ಅನುದಾನ ಎಷ್ಟು ;

(ಇ) ಮಾನ್ವಿ ತಾಲ್ಲೂಕಿನ ಹಿರೇಕೊಟನಿಕಲ್ ಗ್ರಾಮದ ರಾಮಕೃಷ್ಣ ವಿದ್ಯಾ ಸಂಸ್ಥೆಗೆ ಗಡಿ ಅಭಿವೃದ್ಧಿ ಪ್ರಾಧಿಕಾರದಿಂದ ಅನುದಾನ ಮಂಜೂರಾಗಿರುವುದು ಯಾವಾಗ; ಈ ಸಂಸ್ಥೆಯಲ್ಲಿ ಮುಂದುವರೆದ ಕಾಮಗಾರಿಗೆ ಬಾಕಿ ಅನುದಾನ ಬಿಡುಗಡೆ ಮಾಡಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು ?